ಆನೇಕಲ್ ಕ್ಷೇತ್ರದಲ್ಲಿ ಕೆರೆಗಳ ಒತ್ತುವರಿ.

2256(2749)

ಶ್ರೀ ಬಿ.ನಾರಾಯಣಸ್ವಾಮಿ(ಆನೇಕಲ್): ಮಾನ್ಯ ಸಣ್ಣ ನೀರಾವರಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಆನೇಕಲ್ ಕ್ಷೇತ್ರದಲ್ಲಿ ಕೆರೆಗಳು ಒತ್ತುವರಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

ಆ) ಒತ್ತುವರಿ ತೆರವುಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು?

ಶ್ರೀ ಎಸ್.ಕುಮಾರ್ ಬಂಗಾರಪ್ಪ (ಸಣ್ಣ ನೀರಾವರಿ ರಾಜ್ಯ ಸಚಿವರು):

ಅ) ಬಂದಿದೆ.

ಆ) ಆನೇಕಲ್ ಕ್ಷೇತ್ರದಲ್ಲಿ ಕೆರೆಗಳ ಒತ್ತುವರಿ ಬಗ್ಗೆ ವಿವರವಾದ ಸರ್ವೇಕ್ಷಣೆ ನಡೆಸಲಾಗಿದ್ದು, ಸಧ್ಯಕ್ಕೆ 6 ಕೆರೆಗಳು ಒತ್ತುವರಿಯಾಗಿರುವುದನ್ನು ಗುರುತಿಸಲಾಗಿದ್ದು, ಈ 6 ಕೆರೆಗಳ ಒತ್ತುವರಿಯನ್ನು ತೆರವುಗೊಳಿಸುವ ಬಗ್ಗೆಕಂದಾಯ ಇಲಾಖೆಯನ್ನು ಸಂಪರ್ಕಿಸಿದ್ದು, ಒತ್ತುವರಿಯನ್ನು ತೆರವುಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಆನೇಕಲ್ ಕ್ಷೇತ್ರದ ಕೈಗಾರಿಕಾ ಕ್ಷೇತ್ರದಲ್ಲಿ ಸ್ಥಾಪಿಸಲ್ಪಟ್ಟಿರುವ ಸಣ್ಣ, ಮಧ್ಯಮ, ಬೃಹತ್ ಕೈಗಾರಿಕೆಗಳ ಕುರಿತು.

2257(3025)

ಶ್ರೀ ನಾರಾಯಣಸ್ವಾಮಿ.ಎ.(ಆನೇಕಲ್): ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಸಂಪನ್ಮೂಲ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಆನೇಕಲ್ ಕ್ಷೇತ್ರದಲ್ಲಿ ಐದು ಕೈಗಾರಿಕಾ ಕ್ಷೇತ್ರವನ್ನು ಸ್ಥಾಪಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಈ ಕೈಗಾರಿಕಾ ಪ್ರದೇಶದಲ್ಲಿ ಸ್ಥಾಪಿಸಲ್ಪಟ್ಟಿರುವ ಸಣ್ಣ, ಮಧ್ಯಮ, ಬೃಹತ್ ಕೈಗಾರಿಕೆಗಳ ಪಟ್ಟಿ ನೀಡುವುದು.

ಇ) ಈ ಕೈಗಾರಿಕೆಗಳಲ್ಲಿ ಲಭ್ಯವಿರುವ ಕೈಗಾರಿಕೆಗಾರರ ಸಂಖ್ಯೆ ಎಷ್ಟು?